## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2018-19ನೇ ಸಾಲಿನಿಂದ ನಮ್ಮ ಗ್ರಾಮ ನಮ್ಮ ಯೋಜನೆಯನ್ನು ತಯಾರಿಸಲು ಪ್ಲಾನ್‌ಪ್ಲಸ್ ತಂತ್ರಾಂಶವನ್ನು ಬಳಸುವ ಬಗ್ಗೆ.

ಓದಲಾಗಿದೆ,
1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ:20-11-2018 ರಂದು ನಡೆದ ಸಭೆಯ ನಡವಳಿ.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 440 ಜಿಪಸ 2018, ಬೆಂಗಳೂರು, ದಿನಾಂಕ:17-12-2018.

*****

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ:20-11-2018 ರಂದು ನಡೆದ ಸಭೆಯ ನಡವಳಿಯ ಅನ್ವಯ 2015-16, 2016-17 ಮತ್ತು 2017-18ನೇ ಸಾಲುಗಳಲ್ಲಿ "ನಮ್ಮ ಗ್ರಾಮ ನಮ್ಮ ಯೋಜನೆ"(ಜಿ.ಪಿ.ಡಿ.ಪಿ) ಕ್ರಿಯಾ ಯೋಜನೆಯ ತಯಾರಿಕೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಗಾಂಧಿ ಸಾಕ್ಷಿ ಕಾಯಕ ಮತ್ತು ಪಂಚತಂತ್ರ ತಂತ್ರಾಂಶವನ್ನು ಬಳಸಲಾಗುತ್ತಿತ್ತು.

ಮೇಲೆ ಓದಲಾದ (2) ಆದೇಶದ ಅನ್ವಯ "ನಮ್ಮ ಗ್ರಾಮ ನಮ್ಮ ಯೋಜನೆ" ಕ್ರಿಯಾ ಯೋಜನೆಯನ್ನು ಪ್ಲಾನ್ ಪ್ಲಸ್ ತಂತ್ರಾಂಶದಲ್ಲಿ ಅಳವಡಿಸುವ ಅನ್ವಯ ವಿವರಗಳನ್ನು ನೀಡಲಾಗಿತ್ತು. ಮೇಲೆ ಓದಲಾದ ಆದೇಶದ ಅಂತಿಮ ಕಂಡಿಕೆಗೆ ಸಂಬಂಧಿಸಿದಂತೆ ಈ ಕೆಳಕಂಡ ಸ್ಪಷ್ಟೀಕರಣವನ್ನು ನೀಡಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 440 ಜಿಪಸ 2018, ಬೆಂಗಳೂರು, ದಿನಾಂಕ:11-01-2019.**

2018-19 ಮತ್ತು 2019-20ರ ನಮ್ಮ ಗ್ರಾಮ ನಮ್ಮ ಯೋಜನೆಯನ್ನು ಗ್ರಾಮ ಪಂಚಾಯಿತಿಗಳು ಸಾಮಾನ್ಯ ಸಭೆಯಲ್ಲಿ ಅನುಮೋದನೆ ಪಡೆದ ನಂತರ PlanPlus ತಂತ್ರಾಂಶದಲ್ಲಿ ಕಡ್ಡಾಯವಾಗಿ ಕ್ರಿಯಾ ಯೋಜನೆಯನ್ನು ಅಳವಡಿಸಲು ಆದೇಶಿಸಿದೆ. ಮುಂದುವರೆದು, ವಾರ್ಷಿಕ ಕ್ರಿಯಾ ಯೋಜನೆಯನ್ನು ಅನುಷ್ಠಾನಗೊಳಿಸುವ ಮುನ್ನ ಕಡ್ಡಾಯವಾಗಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರಿಂದ ಅನುಮೋದನೆ ಪಡೆದ ನಂತರವೇ ಕ್ರಿಯಾ ಯೋಜನೆಯನ್ನು ಅಂತಿಮಗೊಳಿಸಿ ನಂತರ ActionSoft ತಂತ್ರಾಂಶಕ್ಕೆ Port ಮಾಡಿ, ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಆದೇಶಿಸಿದೆ.

ಇನ್ನು ಮುಂದೆ ಗ್ರಾಮ ಪಂಚಾಯಿತಿಗಳು PlanPlus ತಂತ್ರಾಂಶದಲ್ಲಿ "ನಮ್ಮ ಗ್ರಾಮ ನಮ್ಮ ಯೋಜನೆ"ಗೆ ಸಂಬಂಧಿಸಿದಂತೆ ಮೇಲ್ಕಂಡ ಪ್ರಕ್ರಿಯೆಯನ್ನು ಕಡ್ಡಾಯವಾಗಿ ಅನುಸರಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

11.1.19

ಇವರಿಗೆ:

1. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

2. ನಿರ್ದೇಶಕರು(ಇ-ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ, ಬೆಂಗಳೂರು.
4. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
6. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು.
7. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು (ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಯ ಮುಖಾಂತರ).
8. ಕರ್ನಾಟಕ ವಿಕಾಸ ಮಾಸಪತ್ರಿಕೆಯಲ್ಲಿ ಪ್ರಕಟಿಸಲು.
9. ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
10. ಶಾಖಾ ರಕ್ಷಾಕಡತಕ್ಕೆ / ಹೆಚ್ಚುವರಿ ಪ್ರತಿ

<u>ಪ್ರತಿಯನ್ನು ಮಾಹಿತಿಗಾಗಿ :</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ನಿರ್ದೇಶಕರು(ಪಂ.ರಾಜ್-1 & 2), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.